ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	877
ಸದಸ್ಯರ ಹೆಸರು	ಶ್ರೀ ಅರವಿಂದ ಕುಮಾರ ಅರಳಿ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	09.03.2021
ಉತ್ತರಿಸುವ ಸಚಿವರು	ಗಣಿ ಮತ್ತು ಭೂವಿಜ್ಞಾನ ಸಚಿವರು

ಕ್ರ ಸಂ	ಪ್ರಶ್ನೆಗಳು	ಉತ್ತರ
ಅ.	ಬೀದರ್ ಜಿಲ್ಲೆಯಲ್ಲಿ ಮರಳು ಅಭಾವ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗಾಗಿ ರೂಪಿಸಿರುವ ನೀತಿಗಳು / ನಿಯಮಗಳೇನು; ಅವು ಯಾವುವು;	ಬಂದಿರುತ್ತದೆ. ಸಾರ್ವಜನಿಕರಿಗೆ ಅಗತ್ಯವಿರುವ ಮರಳು ಪೂರೈಕೆಗಾಗಿ ರಾಜ್ಯದಲ್ಲಿ ದಿನಾಂಕ 05.05.2020 ರಂದು ಹೊಸ ಮರಳು ನೀತಿ, 2020 ನ್ನು ಜಾರಿಗೊಳಿಸಿದ್ದು, ಅದರ ಪ್ರಮುಖಾಂಶಗಳು ಕೆಳಕಂಡಂತಿವೆ; • ಸದರಿ ಮರಳು ನೀತಿಯಂತೆ I, II ಮತ್ತು III ನೇ ಶ್ರೇಣಿಯ ಹಳ್ಳ / ತೊರೆ ಮತ್ತು ಕೆರೆಗಳಲ್ಲಿ ಲಭ್ಯವಿರುವ ಮರಳನ್ನು ತೆಗೆಯುವ ಮತ್ತು ವಿಲೇವಾರಿ ಮಾಡುವ ಸಂಪೂರ್ಣ ಹೊಣೆಗಾರಿಕೆಯನ್ನು ಸಂಬಂಧಿಸಿದ ಗ್ರಾಮ ಪಂಚಾಯತ್‌ಗಳಿಗೆ ವಹಿಸಲಾಗಿರುತ್ತದೆ. • ಸದರಿ ಗ್ರಾಮ ಪಂಚಾಯಿತಿಯಿಂದ ವಿಲೇವಾರಿ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ರೂ. 300/- ಗಳನ್ನು ನಿಗದಿಪಡಿಸಲಾಗಿರುತ್ತದೆ. • IV, V ಮತ್ತು VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಲಭ್ಯವಿರುವ ಮರಳನ್ನು ಮತ್ತು ಅಣೆಕಟ್ಟು / ಜಲಾಶಯ / ಬ್ಯಾರೇಜ್‌ಗಳು ಮತ್ತು ಸದರಿ ಹಿನ್ನೀರಿನ ಪ್ರದೇಶಗಳಲ್ಲಿ ಹೂಳು ತೆಗೆಯುವ ಮುಖಾಂತರ ದೊರೆತ ಮರಳನ್ನು ಸರ್ಕಾರಿ ಆದೇಶ ಸಂಖ್ಯೆ ಸಿಐ 344 ಎಂಎಂಎನ್ 2019, ದಿನಾಂಕ: 18.05.2020 ರಂತೆ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾದ ಕರ್ನಾಟಕ ಸ್ಟೇಟ್ ಮಿನರಲ್ ಕಾರ್ಪೋರೇಶನ್ ಲಿ., ಮತ್ತು ಹಟ್ಟಿ ಚಿನ್ನದ ಗಣಿ ನಿಯಮಿತ ಇವರಿಗೆ ವಹಿಸಲಾಗಿರುತ್ತದೆ.

		• ಸದರಿ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಿಂದ ವಿಲೇವಾರಿ ಮಾಡುವ ಪ್ರತಿ ಮೆಟ್ರಿಕ್ ಟನ್ ಮರಳಿಗೆ ರೂ. 700/- ಗಳನ್ನು ನಿಗದಿಪಡಿಸಲಾಗಿರುತ್ತದೆ. • IV, V ಮತ್ತು VI ನೇ ಶ್ರೇಣಿಯ ಹೊಳೆ / ನದಿಗಳಲ್ಲಿ ಲಭ್ಯವಿರುವ ಮರಳನ್ನು ಮತ್ತು ಅಣೆಕಟ್ಟು / ಜಲಾಶಯ / ಬ್ಯಾರೇಜ್‌ಗಳು ಮತ್ತು ಸದರಿ ಹಿನ್ನೀರಿನ ಪ್ರದೇಶಗಳಲ್ಲಿ ಹೂಳು ತೆಗೆಯುವ ಮುಖಾಂತರ ದೊರೆತ ಮರಳನ್ನು ಆನ್‌ಲೈನ್ ಬುಕಿಂಗ್ ವ್ಯವಸ್ಥೆಯಡಿ ಸಾರ್ವಜನಿಕರಿಗೆ ಮರಳು ಪೂರೈಸಲು ಅವಕಾಶ ಕಲ್ಪಿಸಲಾಗಿದೆ.
ಆ.	ಬೀದರ್ ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಮರಳು ಪೂರೈಸಲು ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಮರಳು ಪೂರೈಕೆಯ ಸ್ಥಳಗಳು ಯಾವವು ಮತ್ತು ಸರ್ಕಾರ ಪ್ರತಿ ಟನ್ ಮರಳಿಗೆ ನಿಗದಿಪಡಿಸಿರುವ ದರ ಎಷ್ಟು;(ವಿವರವಾದ ಮಾಹಿತಿ ನೀಡಿವುದು)	ಬೀದರ ಜಿಲ್ಲೆಯಲ್ಲಿ ಹರಿಯುವ ಮಾಂಜ್ರಾ ನದಿ ಪಾತ್ರದಲ್ಲಿ ದೊರೆಯುವ ಮರಳು ಕಟ್ಟಡ ಕಾಮಗಾರಿಗಳಿಗೆ ಬಳಸಲು ಯೋಗ್ಯವಾಗಿಲ್ಲದ ಕಾರಣ ಜಿಲ್ಲೆಯಲ್ಲಿ ಯಾವುದೇ ಮರಳು ಬ್ಲಾಕುಗಳನ್ನು ಗುರುತಿಸಿರುವುದಿಲ್ಲ. ಪ್ರಸ್ತುತ, ಬೀದರ ಜಿಲ್ಲೆಗೆ ನೆರೆಯ ಜಿಲ್ಲೆಗಳಾದ ಕಲಬುರಗಿ, ಯಾದಗಿರಿ ಮತ್ತು ರಾಯಚೂರು ಜಿಲ್ಲೆಗಳಿಂದ ಹಾಗೂ ಮಹಾರಾಷ್ಟ್ರ ರಾಜ್ಯದಿಂದ ಮರಳು ಸರಬರಾಜು ಆಗುತ್ತಿರುತ್ತದೆ.
ಇ	ಜಿಲ್ಲೆಯಲ್ಲಿ ಅಕ್ರಮವಾಗಿ ನಡೆಯುತ್ತಿರುವ ಮರಳುಗಾರಿಕೆ (ಬ್ಲ್ಯಾಕ್ ಸ್ಯಾಂಡ್) ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು; ಎಷ್ಟು ಟನ್ ಮರಳು ಜಪ್ತಿ ಮಾಡಿಕೊಳ್ಳಲಾಗಿದೆ? (ವಿವರವಾದ ಮಾಹಿತಿ ನೀಡುವುದು)	ಬಂದಿರುತ್ತದೆ. ಬೀದರ್ ಜಿಲ್ಲೆಯಲ್ಲಿ ಅನಧಿಕೃತ ಮರಳು ಗಣಿಗಾರಿಕೆ ಚಟುವಟಿಕೆಗಳನ್ನು ತಡೆಗಟ್ಟಲು ಜಿಲ್ಲಾ ಹಾಗೂ ತಾಲ್ಲೂಕು ಮರಳು ಸಮಿತಿಯಿಂದ ನಿಯಮಾನುಸಾರ ಕ್ರಮ ಕೈಗೊಳ್ಳಗುತ್ತಿದೆ. ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ ಅನಧಿಕೃತ ಮರಳು ದಾಸ್ತಾನಿನಡಿ 02 ಪ್ರಕರಣಗಳನ್ನು ದಾಖಲಿಸಲಾಗಿದ್ದು, ಒಟ್ಟು 150 ಮೆಟ್ರಿಕ್ ಟನ್ ಮರಳನ್ನು ವಶಪಡಿಸಿಕೊಂಡು ನಿಯಮಾನುಸಾರ ವಿಲೇವಾರಿ ಮಾಡಲಾಗಿದ್ದು ಸರ್ಕಾರಕ್ಕೆ ರೂ.1.35ಲಕ್ಷಗಳ ರಾಜಧನ ಪಾವತಿಯಾಗಿರುತ್ತದೆ.

--3

ಮುಂದುವರೆದು, ಬೀದರ್ ಜಿಲ್ಲಾ ವ್ಯಾಪ್ತಿಯಲ್ಲಿ 2019–20 ಮತ್ತು 2021–21 ನೇ ಸಾಲಿನ ಜನವರಿ ಅಂತ್ಯದವರೆಗೆ ಅನಧಿಕೃತ ಮರಳು ಸಾಗಾಣಿಕೆಯಡಿ ಕೈಗೊಂಡ ಕ್ರಮದ ವಿವರಗಳು ಈ ಕೆಳಗಿನಂತಿದೆ.

ಕ್ರ ಸಂ	ವರ್ಷ	ಪತ್ತೆ ಹಚ್ಚಿದ ವಾಹನಗಳ ಸಂಖ್ಯೆ	ವಿಧಿಸಿದ ದಂಡ (ರೂ. ಲಕ್ಷಗಳಲ್ಲಿ)
1	2019–20	78	16.70
2	2020–21	43	13.21

ಸಂಖ್ಯೆ ಸಿಐ 128 ಎಂಎಂಎನ್ 2021

(ಮುರುಗೇಶ್ ಆರ್. ನಿರಾಣಿ)
ಗಣಿ ಮತ್ತು ಭೂವಿಜ್ಞಾನ ಸಚಿವರು.